ಕರ್ನಾಟಕ ಸರ್ಕಾರ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-9

ಸಂಖ್ಯೆ: ಟಿಸಿಎನ್/257/2018-19 ದಿನಾಂಕ: 19/2/19

ಅಧಿಕೃತ ಜ್ಞಾಪನಾ ಪತ್ರ

ವಿಷಯ: ಕರ್ನಾಟಕ ರಾಜ್ಯ ಸರಕಾರಿ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರ ಕೇಂದ್ರ ಸಂಘ (ರಿ) ಬೆಂಗಳೂರು ವತಿಯಿಂದ ಮೈಸೂರಿನಲ್ಲಿ ನಡೆಯಲಿರುವ ವೈಜ್ಞಾನಿಕ ಸಮ್ಮೇಳನದಲ್ಲಿ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರವರು ಭಾಗವಹಿಸಲು ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ರಾಜ್ಯ ಸರಕಾರಿ ಸರಕಾರಿ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರ ಕೇಂದ್ರ ಸಂಘ (ರಿ) ಬೆಂಗಳೂರು ಇವರ ಮನವಿಯ ದಿನಾಂಕ: **14-02-2018.**

ಕರ್ನಾಟಕ ರಾಜ್ಯ ಸರಕಾರಿ ಸರಕಾರಿ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರ ಕೇಂದ್ರ ಸಂಘ (ರಿ) ಬೆಂಗಳೂರು ವತಿಯಿಂದ ದಿನಾಂಕ: **02-03-2019** ಶನಿವಾರ ರಂದು ರಾಜ್ಯ ಮಟ್ಟದ ಸರಕಾರಿ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರ ಸಮೇಳನ ಮತ್ತು ವೈಜ್ಞಾನಿಕ ಕಾರ್ಯಾಗಾರದಲ್ಲಿ "ಆರೋಗ್ಯ ವ್ಯವಸ್ಥೆಯಲ್ಲಿ ವೈದ್ಯಕೀಯ ಪ್ರಯೋಗಾಲಯ ಮತ್ತು ಪ್ರಯೋಗಶಾಲಾ ತಂತ್ರಜ್ಞರ ಪಾತ್ರ ಮತ್ತು ಪ್ರಮುಖ್ಯತೆ" ವಿಷಯದ ಕುರಿತು ಮೈಸೂರುನಲ್ಲಿ ಹಮ್ಮಿಕೊಂಡಿದ್ದು. ಆದ್ದರಿಂದ ರಾಜ್ಯ ವಿವಿಧ ಜಿಲ್ಲೆಗಳಿಂದ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್ ರವರು ಭಾಗವಹಿಸಲಿರುವುದರಿಂದ ದಿನಾಂಕ **01-03-2019** ಮತ್ತು **02-03-2019** ರಂದು ಎರಡು ದಿವಸ ವಿಶೇಷ ಸಾಂದರ್ಭಿಕ ರಜೆಯನ್ನು ಹಾಗೂ **03-03-2019** ರಂದು ಭಾನುವಾರ ಅನುಮತಿ ರಜೆಯನ್ನು ಉಪಯೋಗಿಸಿಕೊಳ್ಳಲು ಉಲ್ಲೇಖಿತ ಪತ್ರದಲ್ಲಿ ಸಂಘದ ಅಧ್ಯಕ್ಷರು ಮನವಿಯನ್ನು ಸಲ್ಲಿಸಿರುತ್ತಾರೆ.

ಆದ್ದರಿಂದ ಕರ್ನಾಟಕ ಸರ್ಕಾರಿ ಸೇವಾ ನಿಯಮಗಳ (ಕೆ.ಸಿ.ಎಸ್.ಆರ್) ಅನುಬಂಧ- ಬಿ ನಿಯಮ **13** ರಲ್ಲಿ ವಿಶೇಷ ಸಾಂಧರ್ಭಿಕ ರಜೆ ನಿಯಮದ ಪ್ರಕಾರ ಬೆಳಗಾವಿ ವಿಭಾಗ ಮತ್ತು ಕಲುಬುರಗಿ ವಿಭಾಗದವರೆಗೆ ಸಮ್ಮೇಳನಕ್ಕೆ ಭಾಗವಹಿಸುವ ನೌಕರರಿಗೆ ದಿನಾಂಕ: **01-03-2019** ಮತ್ತು **02-03-2019** ರಂದು ಎರಡು ದಿವಸ ವಿಶೇಷ ಸಾಂದರ್ಭಿಕ ರಜೆಯನ್ನು ಹಾಗೂ ದಿನಾಂಕ: **03-03-2019** ರಂದು ಭಾನುವಾರ ಅನುಮತಿ ರಜೆಯನ್ನು ಉಪಯೋಗಿಸಿಕೊಳ್ಳಲು ಹಾಗೂ ಬೆಂಗಳೂರು ವಿಭಾಗ ಮತ್ತು ಮೈಸೂರು ವಿಭಾಗದ ನೌಕರರಿಗೆ ದಿನಾಂಕ: **02-03-2019** ರಂದು ಒಂದು ದಿವಸ ವಿಶೇಷ ಸಾಂದರ್ಭಿಕ ರಜೆಯನ್ನು ಹಾಗೂ ದಿನಾಂಕ: **03-03-2019** ರಂದು ಭಾನುವಾರ ಅನುಮತಿ ರಜೆಯನ್ನು ಈ ಕೆಳಕಂಡ ನಿಬಂಧನೆಗಳಿಗೆ ಮತ್ತು ಷರತ್ತಿಗೊಳಪಟ್ಟಂತೆ ರಜೆ ಮಂಜೂರು ಮಾಡಿ ಆದೇಶಿಸಿದೆ.

ಷರತ್ತು:-

1. ಆಯಾ ಸಂಸ್ಥೆ ಹಾಗೂ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್ ರವರು ಸಾರ್ವಜನಿಕರಿಗೆ ಕನಿಷ್ಠ ಸೇವೆ ಒದಗಿಸುವಲ್ಲಿ ತೊಂದರೆಯಾಗದಂತೆ ನಿಯಂತ್ರಣಾಧಿಕಾರಿಗಳು ಸಮ್ಮೇಳನಕ್ಕೆ ಹಾಜರಾಗಲು ಅನುಮತಿಯನ್ನು ನೀಡುವುದು.

2. ಸದರಿ ದಿನಾಂಕದಂದು ನಡೆಯುವ ಸಮ್ಮೇಳನಕ್ಕೆ ಭಾಗವಹಿಸುವ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರ ರವರು ಕಡ್ಡಾಯವಾಗಿ ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ನಿಯಂತ್ರಣಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

3. ಸಮ್ಮೇಳನದಲ್ಲಿ ಭಾಗವಹಿಸುವ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರ ರವರಿಗೆ ಯಾವುದೇ ಭತ್ಯೆಗಳಿಗೆ ಅರ್ಹರಿರುವುದಿಲ್ಲ.

" ಕಛೇರಿ ಟಿಪ್ಪಣಿ ನಿರ್ದೇಶಕರಿಂದ
ಅನುಮೋದಿಸಲ್ಪಟ್ಟಿದೆ"

19/2/19

ನಿರ್ದೇಶಕರ ಪರವಾಗಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:

1. ಡೀನ್ ಮತ್ತು ನಿರ್ದೇಶಕರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ——————
2. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ——————
3. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು/ಅಧೀಕ್ಷಕರುಗಳಿಗೆ——————
4. ಮುಖ್ಯ ವೈದ್ಯಾಧಿಕಾರಿಗಳು ಸಾರ್ವಜನಿಕ ಆಸ್ಪತ್ರೆ, ------------------------------
5. ವೈದ್ಯಾಧಿಕಾರಿಗಳು, ಸಮುದಾಯ ಆರೋಗ್ಯ ಕೇಂದ್ರ/ಪ್ರಾಥಮಿಕ ಆರೋಗ್ಯ ಕೇಂದ್ರ ----------
6. ಅಧ್ಯಕ್ಷಕರು/ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸರಕಾರಿ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಾಜಿಸ್ಟ್‌ರ ಕೇಂದ್ರ ಸಂಘ (ರಿ) ಬೆಂಗಳೂರು
7. ------------------------------------------------------------
8. ಕಛೇರಿ ಪತ್ರಿ.